ಶುಕ್ರವಾರ 12–09–2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01–ಸಂಚಿಕೆ 44 Digital Varthe Kannada Daily Volume 01 - Issue 44 Friday 12-09-2025 Price: 5/- Rs 2 Pages Bengalore

DIGITAL VARTHE

www.digitalvarthe.com
digitalvarthe@gmail.com

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು
ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು
RNI:KNKAN/25/A1348
ಕನ್ನಡ ದಿನಪತ್ರಿಕೆ

## ಪ್ರಚೋದನಕಾರಿ ಭಾಷಣ ಮಾಡಿ ಹಿಂಸೆಗೆ ಪ್ರೇರೇಪಿಸುವುದು ಬಿಜೆಪಿಯವರ ಸಂಸ್ಕೃತಿ :ಡಿಸಿಎಂ ಆಕ್ರೋಶ



ಬೆಂಗಳೂರು: ಪ್ರಚೋದನಕಾರಿ ಭಾಷಣ ಮಾಡುವುದು, ಹಿಂಸೆಗೆ ಪ್ರೇರೇಪಿಸುವುದು ಬಿಜೆಪಿಯವರ ಪದ್ಧತಿ ಹಾಗೂ ಸಂಸ್ಕೃತಿ ಎಂದು ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅಕ್ರೋಶ ವ್ಯಕ್ತಪಡಿಸಿದ್ದಾರೆ. ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರ ನಡವಳಿಕೆ ಜನರ ಮುಂದೆ ಬಯಲಾಗಿದೆ ಎಂದು ತಿರುಗೇಟು ನೀಡಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಮತಪತ್ರ ಹಾಗೂ ಮತಯಂತ್ರ ಬಳಕೆಗೆ ಅವಕಾಶ ಕಲ್ಪಿಸಿ ಬಿಜೆಪಿಯ ಸರ್ಕಾರದ ಅವಧಿಯಲ್ಲೇ ಕಾನೂನು ರೂಪಿಸಲಾಗಿದೆ. ಅದರಂತೆ ನಮ ಸರ್ಕಾರ ಮತಪತ್ರಗಳನ್ನು ಬಳಸಿ, ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ನಿರ್ಧರಿಸಿದೆ ಎಂದರು. ಬಿಜೆಪಿಯವರು ಮಾಡಿರುವ ಕಾನೂನು ತಿದ್ದುಪಡಿ ಚುನಾವಣಾ ಆಯೋಗಕ್ಕೆ ಅನ್ವಯಿಸುತ್ತದೆ. ಇತ್ತೀಚೆಗೆ ಗ್ರೇಟರ್ ಬೆಂಗಳೂರು ಕಾಯ್ದೆ ರೂಪಿಸುವಾಗ ತಾವು ಬಿಜೆಪಿ ಸರ್ಕಾರದ ಕಾನೂನು ತಿದ್ದುಪಡಿಯನ್ನು ಅನುಸ–ರಿಸಿದ್ದೇವೆ ಎಂದು ಹೇಳಿದರು.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಬಗ್ಗೆ ತಮಗೆ ಮಾಹಿತಿಯಿಲ್ಲ. ವಿಷಯ ತಿಳಿದುಕೊಂಡ ಬಳಿಕ ಪ್ರತಿಕ್ರಿಯೆ ನೀಡುತ್ತೇನೆ ಎಂದು ಹೇಳಿದರು. ಶಿವಾಜಿನಗರ ಮೆಟ್ರೋ ನಿಲ್ದಾಣಕ್ಕೆ ಸೆಂಟ್ ಮೇರಿಸ್ ಹೆಸರಿಡಬೇಕು ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಸ್ತಾವನೆಗೆ ಬಿಜೆಪಿ ವಿರೋಧ ವ್ಯಕ್ತಪಡಿಸಿರುವ ಬಗ್ಗೆ ಕೇಳಿದಾಗ, ಮೆಟ್ರೋ ನಿಲ್ದಾಣಗಳಿಗೆ ಹೆಸರಿಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವುದರಲ್ಲಿ ಯಾವುದೇ ತಪ್ಪಿಲ್ಲ. ಈ ವಿಚಾರವಾಗಿ ನಾವು ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಹಿರಿಯ ನಾಯಕರು. ಯಾರೆಲ್ಲಾ ಹುದ್ದೆ ಹಾಗೂ ಜವಾಬ್ದಾರಿ ತೆಗೆದುಕೊಂಡಿದ್ದಾರೆ ಅವರು ಪಕ್ಷಕ್ಕೆ ನಿಷ್ಠರಾಗಿ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ. ಕಾರ್ಯಕರ್ತರಾಗಿ, ಪಕ್ಷದ ಪದಾಧಿಕಾರಿಯಾಗಿ ಜವಾಬ್ದಾರಿ ವಹಿಸಿಕೊಂಡವರು ಅದಕ್ಕಾಗಿ ಸಮಯ ಮೀಸಲಿಡಬೇಕು. ಈ ಹುದ್ದೆಗಳು ಹೇಳಿಕೊಳ್ಳುವುದಕ್ಕೆ ಪಡೆಯುವಂತಹದ್ದಲ್ಲ. ಇದು ಪಕ್ಷ ಸಂಘಟನೆಗೆ ಹಾಗೂ ಪಕ್ಷದ ಆಚಾರ ವಿಚಾರಗಳನ್ನು ಜನರಿಗೆ ಮನವ–ರಿಕೆ ಮಾಡಲು ನೀಡಲಾಗುವುದು ಎಂದು ತಿಳಿಸಿದರು.

## ನಾನು ಎಬಿವಿಪಿ ಕಾರ್ಯಕ್ರಮಕ್ಕೆ ಹೋಗಿಲ್ಲ ಸಚಿವ ಪರಮೇಶ್ವರ್ ಸ್ಪಷ್ಟನೆ



ಬೆಂಗಳೂರು: ರಾಜ–ಕೀಯದಲ್ಲಿ ತಮಗೂ ಶತ್ರುಗಳಿದ್ದು, ಕ್ಷುಲ್ಲಕ ವಿಚಾರಗಳಿಗೆ ಅಪಪ್ರಚಾರ ಮಾಡುವ ಪ್ರಯತ್ನ ಮಾಡುತ್ತಿದ್ದಾರೆ. ಆದರೆ ತಾವು ಎಬಿವಿಪಿಯ ಯಾವುದೇ ಕಾರ್ಯಕ್ರಮದಲ್ಲಿ ಭಾಗವಹಿಸಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು 35 ವರ್ಷಗಳಿಂದಲೂ ರಾಜಕೀಯ ಜೀವನದಲ್ಲಿದ್ದೇನೆ. ನನಗೆ ಸೈದ್ಧಾಂತಿಕ ಬದ್ಧತೆ ಇದೆ.

ಅದನ್ನು ಯಾರೂ ಪ್ರಶ್ನೆ ಮಾಡುವ ಹಾಗಿಲ್ಲ. ನಾನು ನಿಜವಾದ ಕಾಂಗ್ರೆಸಿಗ, ಕಾಂಗ್ರೆಸಿಗನಾಗಿಯೇ ಸಾಯುತ್ತೇನೆ ಎಂದಿದ್ದಾರೆ. ತುಮಕೂರಿನಲ್ಲಿ ರಾಣಿ ಅಬ್ಬಕ್ಕ ಅವರ ಮೆರವಣಿಗೆ ನಡೆದಿತ್ತು. ಅಬ್ಬಕ್ಕ ದೇವಿಗೆ ಹೂವಿನಹಾರ ಹಾಕಿ ಎಂದು ಮನವಿ ಮಾಡಿಕೊಂಡರು. ತಮೊಂದಿಗೆ ತಿಪಟೂರಿನ ಶಾಸಕ ಷಡಕ್ಷರಿ ಕೂಡ ಇದ್ದರು.

ತಾವು ಕಾರಿನಿಂದ ಇಳಿದು ರಾಣಿ ಅಬ್ಬಕ್ಕ ದೇವಿಗೆ ಪುಷ್ಪ ನಮನ ಸಲ್ಲಿಸಿದ್ದೇನೆ ಅದರ ಹೊರತಾಗಿ ಎಬಿವಿಪಿಯ ಕಾರ್ಯಕ್ರಮದಲ್ಲಿ ಭಾಗವಹಿಸಿಲ್ಲ. ಇದನ್ನು ವಿವಾದ ಮಾಡುವುದಾದರೆ ಮಾಡಿಕೊಳ್ಳಲಿ, ಅದರಿಂದ ನನಗೇನು ತೊಂದರೆ ಇಲ್ಲ ಎಂದಿದ್ದಾರೆ.

ಪರಮೇಶ್ವರ್ ಏನು ಎಂದು ರಾಜ್ಯದ ಜನರಿಗೆ ಗೊತ್ತಿದೆ. ಇಂತಹ ಕೀಳು ಮಟ್ಟದ ತಂತ್ರಗಾ–ರಿಕೆಗಳನ್ನು ಜನ ಅರ್ಥ ಮಾಡಿಕೊಳ್ಳುತ್ತಾರೆ. ಪಕ್ಷದ ಒಳಗೆ ಹಾಗೂ ಹೊರಗೆ ಇರುವವರು ಅಪಪ್ರಚಾರ ಮಾಡುವುದು ಸಾಮಾನ್ಯ. ನಾನು ಏನು ಎಂದು ಪದೇ ಪದೇ ಸಾಬೀತು ಪಡಿಸುವ ಅಗತ್ಯ ಇಲ್ಲ ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ಮದ್ದೂರು ಪೊಲೀಸ್ ಠಾಣೆಯಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ದ್ವೇಷ ಭಾಷಣ ಮಾಡಿದ್ದಾರೆ ಎಂಬ ಕಾರಣಕ್ಕೆ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಅಗತ್ಯ ಕ್ರಮಕೈಗೊಳ್ಳುತ್ತಾರೆ ಎಂದರು. ಮದ್ದೂರು ಈಗ ಶಾಂತಿಯುತವಾಗಿದೆ. ಕಲ್ಲು ತೂರಾಟ ನಡೆಸಿದವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗಿದೆ. ಮಾರನೇ ದಿನ ಕೂಡ ಪ್ರತಿಭಟನೆಗಳನ್ನು ಚಿತ್ರೀಕರಿಸಲಾಗಿದೆ. ಪ್ರಚೋದನಕಾರಿ ಭಾಷಣ ಮಾಡಿದ್ದವರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗವುದು ಎಂದು ಅವರು ತಿಳಿಸಿದರು.

ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿ ಅವೈಜ್ಞಾನಿಕವಾಗಿ ಇದೆ ಎಂದು ಆರೋಪಿಸಿ ಕೆಲ ಜಾತಿಗಳು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿರುವುದು ಮುಖ್ಯಮಂತ್ರಿಗಳ ಗಮನಕ್ಕಿದೆ. ರಾಜ್ಯ ಸರ್ಕಾರ ಎಲ್ಲಾ ರೀತಿಯ ಲೆಕ್ಕಾಚಾರಗಳನ್ನೂ ಮಾಡಿಯೇ ಮೀಸಲಾತಿ ವರ್ಗೀಕರಣ ಮಾಡಿದೆ. ಇದಕ್ಕೆ ಕೆಲವರು ಒಪ್ಪಿಲ್ಲ ಎಂದು ಹೇಳಲಾಗುತ್ತಿದ್ದು, ಅತಹವರು ಪ್ರತಿಭಟನೆ ಮಾಡುತ್ತಿದ್ದಾರೆ, ಅವರು ಮುಖ್ಯಮಂತ್ರಿಯವರನ್ನು ಭೇಟಿ ಮಾಡಬಹುದು. ಇಂತಹ ವಿಚಾರಗಳಲ್ಲಿ ಒಬ್ಬರೇ ತೀರ್ಮಾನ ತೆಗೆದುಕೊಳ್ಳಲು ಸಾಧ್ಯವಿಲ್ಲ, ಮುಖ್ಯಮಂತ್ರಿ ಅವರು ಎಲ್ಲರ ಜೊತೆ ಚರ್ಚಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ತಿಳಿಸಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಯಂತ್ರಗಳ ಬದಲಾಗಿ ಮತಪತ್ರಗಳನ್ನು ಬಳಸುವುದು ಸಂಪುಟದ ತೀರ್ಮಾನ. ಈ ಸಂಬಂಧಪಟ್ಟಂತೆ ಸುಗ್ರೀವಾಜ್ಞೆ ಕೂಡ ಹೊರಡಿಸಲಾಗುವುದು. ಅ ನಂತರದ ಬೆಳವಣಿಗೆಗಳನ್ನು ಕಾದು ನೋಡುತ್ತೇವೆ ಎಂದರು.

## ಯುವತಿ ಜೊತೆ ಅಸಭ್ಯವಾಗಿ ವರ್ತಿಸಿದ ಬಸ್ ಚಾಲಕನಿಗೆ ಬೆತ್ತಲೆಗೊಳಿಸಿ ಥಳಿತ



ಬೆಂಗಳೂರು: ಹೈದರಾಬಾದ್‌ನಿಂದ ನಗರಕ್ಕೆ ಸ್ಲೀಪರ್ ಕೋಚ್ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಬಾಲಕಿಯೊಂದಿಗೆ ಚಾಲಕ ಅಸಭ್ಯವಾಗಿ ವರ್ತಿಸಿದನೆಂದು ಆರೋಪಿಸಿ ಅರೆ ಬೆತ್ತಲೆಗೊಳಿಸಿ ಥಳಿಸಿರುವ ಘಟನೆ ನಡೆದಿದೆ.

ನಗರದಲ್ಲಿ ವಾಸವಾಗಿರುವ 15 ವರ್ಷದ ಬಾಲಕಿ ಹೈದರಾಬಾದ್‌ನಲ್ಲಿರುವ ತನ್ನ ಅಕ್ಕನ ಮನೆಗೆ ಹೋಗಿದ್ದು, ರಾತ್ರಿ ವಾಪಸ್ ಬೆಂಗಳೂರಿಗೆ ಬರಲು ಸ್ಲೀಪರ್‌ಕೋಚ್ ಬಸ್ಸಿನಲ್ಲಿ ಪ್ರಯಾಣಿಸಿದ್ದಾಳೆ. ಮಾರ್ಗಮಧ್ಯೆ ಮೊಬೈಲ್ ಸ್ವಿಚ್‌ಆಫ್ ಆಗಿದ್ದರಿಂದ ಚಾಲಕನಿಗೆ ಚಾರ್ಜ್ ಹಾಕುವಂತೆ ಮೊಬೈಲ್ ಕೊಟ್ಟಿದ್ದು, ಸ್ವಲ್ಪ ಸಮಯದ ಬಳಿಕ ಮೊಬೈಲ್ ತೆಗೆದುಕೊಳ್ಳಲು ಹೋದಾಗ ಬಾಲಕಿ ಜೊತೆ ಆತ ಅಸಭ್ಯವಾಗಿ ವರ್ತಿಸಿದ್ದಾನೆ. ಬಾಲಕಿ ವಿರೋಧ ವ್ಯಕ್ತಪಡಿಸಿದರೂ ಆಕೆ ಮಲಗಿದ್ದ ಸೀಟ್ ಬಳಿ ಪದೇ ಪದೇ ಹೋಗಿ ಕಿರುಕುಳ ನೀಡಿದ್ದಾನೆ. ಈ ಘಟನೆಯಿಂದ ಎದುರಿದ ಬಾಲಕಿ ತನ್ನ ತಾಯಿಗೆ ಮೊಬೈಲ್ ಕರೆ ಮಾಡಿ ವಿಷಯ ತಿಳಿಸಿದ್ದಾಳೆ.

ಈ ಬಸ್ ಇಂದು ಬೆಳಗ್ಗೆ ನಗರದ ಬಸವೇಶ್ವರ ವೃತ್ತದ ಬಳಿ ಬರುತ್ತಿದ್ದಂತೆ ಬಾಲಕಿಯ ತಾಯಿ ಹಾಗೂ ಸಹೋದರ ಅಲ್ಲಿಗೆ ಬಂದಿದ್ದು, ಚಾಲಕನನ್ನು ಹೊರಗೆಳೆದು ಅರೆ ಬೆತ್ತಲೆಗೊಳಿಸಿ, ಥಳಿಸಿದ್ದಾರೆ. ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಹೈಗ್ರೌಂಡ್ ಠಾಣೆ ಪೊಲೀಸರು ಘಟನೆ ಬಗ್ಗೆ ವಿಚಾರಣೆ ನಡೆಸುತ್ತಿದ್ದಾರೆ.

## ಗ್ರೇಟರ್ ಬೆಂಗಳೂರು ಪ್ರಾಧಿಕಾರ ವಾರ್ಡ್‌ಗಳ ಸಂಖ್ಯೆ 365ಕ್ಕೆ ಹೆಚ್ಚಿಸುವ ಸಾಧ್ಯತೆ




ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಬದಲಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ ಮಾಡಿರುವ ಬೆನ್ನಲ್ಲೇ ಇದೀಗ ರಾಜ್ಯ ಸರ್ಕಾರ ವಾರ್ಡ್‌ಗಳ ಸಂಖ್ಯೆಯನ್ನು 365ಕ್ಕೆ ಹೆಚ್ಚಿಸಲು ಮುಂದಾಗಿದೆ. ಒಂದು ವೇಳೆ ಶಾಸಕರ ಬೇಡಿಕೆಯಂತೆ ಜಿಬಿಎ ವ್ಯಾಪ್ತಿಯ ವಾರ್ಡ್‌ಗಳನ್ನು ಹೆಚ್ಚಳ ಮಾಡಿದರೆ ದೇಶದಲ್ಲೇ ಅತಿದೊಡ್ಡ ನಗರ ಪಾಲಿಕೆ ಎಂಬ ಹೆಗ್ಗಳಿಕೆಗೆ ಬೆಂಗಳೂರು ಪಾತ್ರವಾಗಲಿದೆ. ಸದ್ಯ ಮುಂಬೈ ಮಹಾನಗರ ಪಾಲಿಕೆ ಭಾರತದ ಅತಿದೊಡ್ಡ ಪಾಲಿಕೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಇತ್ತೀಚೆಗೆ ಮುಕ್ತಾಯಗೊಂಡ ಚಳಿಗಾಲದ ಅಧಿವೇಶನದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ಕಾಯ್ದೆ ಅಂಗೀಕಾರ ಪಡೆದುಕೊಂಡಿತ್ತು.

ಈ ಹಿಂದೆ ಬಿಬಿಎಂಪಿ ಅಸ್ತಿತ್ವದಲ್ಲಿದ್ದಾಗ 198 ವಾರ್ಡ್‌ಗಳು ಇದ್ದವು. ಇದೀಗ ಹೊಸದಾಗಿ ಜಿಬಿಎ ಬಂದ ನಂತರ ಬೆಂಗಳೂರಿನ ವಿಸ್ತಾರ ಹೆಚ್ಚಾಗಿದ್ದು, ವಾರ್ಡ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕೆಂಬ ಬೇಡಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಳಿ ನಗರ ಶಾಸಕರು ಬೇಡಿಕೆ ಇಟ್ಟಿದ್ದರು. ಇತ್ತೀಚೆಗೆ ಬೆಂಗಳೂರು ನಗರ ವ್ಯಾಪ್ತಿಯ ಶಾಸಕರ ಜೊತೆ ಸಭೆ ನಡೆಸಿದ್ದ ಮುಖ್ಯಮಂತ್ರಿಗಳು ನಗರದ ರಸ್ತೆ ಗುಂಡಿಗಳನ್ನು ಮುಚ್ಚುವುದು ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಸೂಚನೆ ಕೊಟ್ಟಿದ್ದರು.

ಈ ವೇಳೆ ಸಚಿವರು ಮತ್ತು ಶಾಸಕರು ವಾರ್ಡ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕೆಂದು ಆಡಳಿತಾರೂಢ ಕಾಂಗ್ರೆಸ್ ಶಾಸಕರು ಸಿಎಂಗೆ ಮನವರಿಕೆ ಮಾಡಿದ್ದರು. ವಾರ್ಡ್ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಹೆಚ್ಚಳವಾದರೆ ಕಾಂಗ್ರೆಸ್‌ಗೆ ಅನುಕೂಲವಾಗಲಿದೆ. 198 ವಾರ್ಡ್‌ಗಳಲ್ಲಿ ಚುನಾವಣೆ ನಡೆಸಿದರೆ ಬಿಜೆಪಿಗೆ ಅನುಕೂಲವಾಗಿದೆ. ನಗರ ಮತದಾರರು ಬಿಜೆಪಿ ಕಡೆ ಒಲವು ತೋರುತ್ತಾರೆ. 2023ರ ವಿಧಾನಸಭೆ ಚುನಾವಣೆ ಹಾಗೂ 2024ರ ಲೋಕಸಭಾ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಕ್ಷೇತ್ರ ಸೇರಿದಂತೆ ಐದು ಲೋಕಸಭಾ ಕ್ಷೇತ್ರಗಳನ್ನು ಬಿಜೆಪಿ ಗೆದ್ದಿದೆ. ಹೀಗಾಗಿ ವಾರ್ಡ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಿದರೆ 5 ಪಾಲಿಕೆಗಳಲ್ಲಿ ಕನಿಷ್ಠಪಕ್ಷ 2ರಿಂದ 3 ಪಾಲಿಕೆಗಳಲ್ಲಿ ಅಧಿಕಾರ ಹಿಡಿಯಬಹುದೆಂದು ಸಚಿವರು ಮತ್ತು ಶಾಸಕರು ಸಿಎಂಗೆ ಅಂಕಿಸಂಖ್ಯೆ, ಮತದಾರರ ಪಟ್ಟಿ, ಹಿಂದೆ ಪಡೆದಿದ್ದ ಮತ ವಿವರ ಇತ್ಯಾದಿಯನ್ನು ವಿವರಿಸಿದ್ದರು.

ಶಾಸಕರ ಬೇಡಿಕೆಗೆ ಬಹುತೇಕ ಅಸ್ತು ಎಂದಿರುವ ಸಿಎಂ ವಾರ್ಡ್ ಹೆಚ್ಚಳ ಕುರಿತು ಬಿಬಿಎಂಪಿ ಅಧಿಕಾರಿಗಳು, ನಗರಾಭಿವೃದ್ಧಿ ಇಲಾಖೆ ಹಾಗೂ ಡಿಸಿಎಂ ಜೊತೆ ಇನ್ನೊಂದು ಸುತ್ತಿನ ಮಾತುಕತೆ ನಡೆಸಿ ಸೂಕ್ತವಾದ ನಿರ್ಧಾರ ತೆಗೆದುಕೊಳ್ಳುವ ಭರವಸೆಯನ್ನು ಕೊಟ್ಟಿದ್ದರು ಎಂದು ತಿಳಿದುಬಂದಿದೆ. ವಾರ್ಡ್ ಸಂಖ್ಯೆ ಹೆಚ್ಚಳವಾದರೆ ಪಕ್ಷಕ್ಕೆ ದುಡಿದಿರುವ ಮುಖಂಡ–ರಿಗೆ ಟಿಕೆಟ್ ನೀಡಬಹುದು. ಇದರಿಂದ ರಾಜಕೀಯ ಪ್ರಾತಿನಿಧ್ಯವನ್ನು ಕಲ್ಪಿಸಿದಂತಾಗುತ್ತದೆ. ಮುಂದಿನ 2028ರ ವಿಧಾನಸಭೆ ಚುನಾವಣೆಯಲ್ಲಿ ಪಕ್ಷದ ಪರ ಕಾರ್ಯ ನಿರ್ವಹಿಸಲು ಅನುಕೂಲವಾಗುತ್ತದೆ ಎಂದು ಹೇಳಿದ್ದರು.ಪಕ್ಷ ಸಂಘಟನೆಯನ್ನು ಬಲಪಡಿಸುವುದು, ಕಾರ್ಯಕರ್ತರಿಗೆ ರಾಜಕೀಯ ಪ್ರಾತಿನಿಧ್ಯ ವಹಿಸಿದರೆ ಕಾಂಗ್ರೆಸ್ 2028ರ ಚುನಾವಣೆಯಲ್ಲಿ ಪುನಃ ಅಧಿಕಾರ ಹಿಡಿಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದ್ದರು.

ಶಾಸಕರ ಬೇಡಿಕೆ ಏನು: ಜಿಬಿಎ ವ್ಯಾಪ್ತಿಯಲ್ಲಿ 365 ವಾರ್ಡ್‌ಗಳನ್ನು ರಚಿಸಬೇಕು. ಬೆಂಗಳೂರು ಉತ್ತರ 75, ಬೆಂಗಳೂರು ದಕ್ಷಿಣ 75, ಬೆಂಗಳೂರು ಕೇಂದ್ರ 63, ಬೆಂಗಳೂರು ಪೂರ್ವ 50, ಬೆಂಗಳೂರು ಪಶ್ಚಿಮ 102 ವಾಡ್ ರ್ಗಳನ್ನು ರಚಿಸುವಂತೆ ಮನವಿ ಮಾಡಿದ್ದರು. *2011ರ ಜನಸಂಖ್ಯೆಯಂತೆ ವಾರ್ಡ್‌ಗಳನ್ನು ರಚಿಸಿ ಪ್ರತಿ ವಾರ್ಡ್‌ಗೆ ಸರಾಸರಿ 17 ಸಾವಿರದಿಂದ 35 ಸಾವಿರ ಮತದಾರರನ್ನು ನಿಗದಿಪಡಿಸುವಂತೆ ಕೋರಿದ್ದರು.

## ಶೈಕ್ಷಣಿಕ, ಸಾಮಾಜಿಕ, ಹಾಗೂ ಆರ್ಥಿಕ ಸಮೀಕ್ಷೆಯಲ್ಲಿ ಒಕ್ಕಲಿಗ ಎಂದು ನಮೂದಿಸಿ :ನಿರ್ಮಲಾನಂದನಾಥ ಸ್ವಾಮೀಜಿ



ಮೈಸೂರು: ಕರ್ನಾಟಕ ರಾಜ್ಯ ಸರ್ಕಾರದಿಂದ ಸೆ.22ರಿಂದ 15 ದಿನಗಳ ಕಾಲ ನಡೆಯುವ ಹಿಂದುಳಿದ ವರ್ಗಗಳ ಆಯೋಗದ ಶೈಕ್ಷಣಿಕ, ಸಾಮಾಜಿಕ, ಹಾಗೂ ಆರ್ಥಿಕ ಸಮೀಕ್ಷೆಯಲ್ಲಿ ಒಕ್ಕಲಿಗ ಜನಾಂಗ ಒಕ್ಕಲಿಗ ಎಂದೇ ನಮೂದಿಸುವಂತೆ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ತಿಳಿಸಿದರು.

ಮೈಸೂರಿನ ಹೆಬ್ಬಾಳದ ಆದಿಚುಂಚನಗಿರಿ ಶಾಖಾ ಮಠದಲ್ಲಿ ಜಾತಿಗಣತಿ ಸಂಬಂಧ ಪೂರ್ವಭಾವಿಯಾಗಿ ಜಿಲ್ಲೆಯ ಒಕ್ಕಲಿಗ ಜನಾಂಗದ ಮುಖಂಡರ ಸಭೆಯ ಸಾನ್ನಿಧ್ಯವಹಿಸಿ ಅವರು ಮಾತನಾಡಿದರು. ಮುಂಬರುವ ಸಮೀಕ್ಷೆಯಲ್ಲಿ ಜಾತಿ ಕಲಂ ನಲ್ಲಿ ಒಕ್ಕಲಿಗ ಎಂದೇ ನಮೂದಿಸಬೇಕು. ಉಪ ಜಾತಿ ಕಲಂನಲ್ಲಿ ಉಪಪಂಗಡ ಬಗ್ಗೆ ಮಾಹಿತಿ ಇದರೇ ನಮೂದಿಸಬೇಕು ಇಲ್ಲದಿದ್ದರೆ ಒಕ್ಕಲಿಗ ಎಂದೇ ನಮೂದಿಸಬೇಕು ಎಂದು ತಿಳಿಸಿದರು.

ತಮ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ನಿಖರವಾದ ಮಾಹಿತಿಯನ್ನು ನೀಡಬೇಕು. ಪ್ರತಿ ಗ್ರಾಮಕ್ಕೂ ಈ ಮಾಹಿತಿಯನ್ನು ನೀಡುವ ಜವಾಬ್ದಾರಿಯನ್ನು ಮುಖಂಡರುಗಳು ಸ್ವಯಂ ಪ್ರೇರಿತವಾಗಿ ಮಾಡಬೇಕು ಎಂದು ಸೂಚಿಸಿದರು. ಎಲ್ಲರೂ ಈ ಸಮೀಕ್ಷೆಯಲ್ಲಿ ಪ್ರತಿಯೊಬ್ಬರು ಪಾಲ್ಗೊಳ್ಳುವಂತೆ ಕ್ರಮ ವಹಿಸಬೇಕೆಂದು ಹೇಳಿದರು. ಈ ಜವಾಬ್ದಾರಿಯನ್ನು ಆಯಾ ಗ್ರಾಮ, ತಾಲ್ಲೂಕು, ಜಿಲ್ಲಾ ಮುಖಂಡರುಗಳು ವಹಿಸಿಕೊಂಡು ಸಮೀಕ್ಷೆಗೆ ಸಹಕರಿಸುವಂತೆ ಕೋರಿದರು. ಈ ಸಂದರ್ಭದಲ್ಲಿ ಮೈಸೂರು ಶಾಖಾಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಆದಿಚುಂಚನಗಿರಿ ಮಠದ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ, ಶಾಸಕ ಜಿ.ಡಿ.ಹರೀಶ್ ಗೌಡ, ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿಯ ಆಡಿಟರ್ ನಾಗರಾಜ್, ಮೈಸೂರು ಹಾಗೂ ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಮರಿಸ್ವಾಮಿ, ಗೌರವಾಧ್ಯಕ್ಷ ಅಲತೂರು ಜಯರಾಮ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಕೆ.ವಿ.ಶ್ರೀಧರ್, ಸಿ.ಜಿ.ಗಂಗಾಧರ್, ಎಂ.ಬಿ.ಮಂಜೇಗೌಡ, ಜಿಲ್ಲಾ ಒಕ್ಕಲಿಗ ಸಂಘದ ಪ್ರಧಾನ ಕಾರ್ಯದರ್ಶಿ ಈ.ಎಂ. ಚೇತನ್, ಉಪಾಧ್ಯಕ್ಷ ಮಹೇಶ್, ಖಚಾಂಚಿ ಆರ್.ಲೋಕೇಶ್, ನಿರ್ದೇಶಕರಾದ ಪ್ರಶಾಂತ್ ಗೌಡ, ಕೆ.ಪಿ.ನಾಗಣ್ಣ, ಬಿ.ಪಿ.ಬೋರೇಗೌಡ, ಎ.ರವಿ, ಗುರುರಾಜ್, ಯಳಂದೂರು ಕುಮಾರ್, ಮೈಸೂರು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್. ಅರುಣ್‌ಕುಮಾರ್, ನಗರಪಾಲಿಕೆ ಮಾಜಿ ಸದಸ್ಯರಾದ ಪ್ರೇಮ ಶಂಕರೇಗೌಡ, ಮುಖಂಡರಾದ ಕಾವೇರಿ ಆಸ್ಪತ್ರೆಯ ಡಾ.ಚಂದ್ರಶೇಖರ್, ಡಾ.ಎಸ್.ಪಿ ಯೋಗಣ್ಣ, ಡಾ.ಸುಶ್ರೂತ್ ಗೌಡ, ಹೆಚ್.ಕೆ. ರಮೇಶ್, ಸವಿತಾ ಗೌಡ, ಹೇಮಾ ನಂದೀಶ್, ಯೋಗೇಶ್, ಕುಮಾರ್, ಕೀಲಾರ ಜಯರಾಮ್ ಇನ್ನಿತರರು ಉಪಸ್ಥಿತರಿದ್ದರು.

# ಮಾದಕ ವಸ್ತು ನಿರ್ಮೂಲನೆಗೆ ಸಾರ್ವಜನಿಕರು ಕೈ ಜೋಡಿಸಬೇಕು

## ಮಾದಕ ಮುಕ್ತ ಸಮಾಜ ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ: ಸಿಇಒ ಡಾ.ಕೆ.ಎನ್.ಅನುರಾಧ

ಬೆಂಗಳೂರು ಗ್ರಾಮಾಂತರ ಜಿಲ್ಲೆ: ಉಜ್ವಲ ಭವಿಷ್ಯ ರೂಪಿಸಿಕೊಳ್ಳುವ ಸಮಯದಲ್ಲಿ ಯುವಕರು ಹೆಚ್ಚಾಗಿ ಮಾದಕ ವಸ್ತುಗಳ ಗುಲಾಮರಾಗುತ್ತಿದ್ದಾರೆ, ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಿ ಮಾದಕ ವಸ್ತು ಮುಕ್ತ ಜಿಲ್ಲೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಆಗಿದೆ ಎಂದು ಜಿಲ್ಲಾ ಪಂಚಾಯತ್ ಸಿಇಒ ಡಾ.ಕೆ.ಎನ್ ಅನುರಾಧ ಅವರು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಮಾದಕ ಮುಕ್ತ ಕರ್ನಾಟಕ ಅಭಿಯಾನದಡಿ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಶಾ ಮುಕ್ತ ಕರ್ನಾಟಕ ಅಭಿಯಾನದಡಿ ಪ್ರತಿಜ್ಞಾ ವಿಧಿಯನ್ನು ಬೋಧಿಸಿ, ಮಾದಕ ಮುಕ್ತ ಸಮಾಜವನ್ನು ನಿರ್ಮಾಣ ಮಾಡುವುದು ನಮ್ಮ ಧ್ಯೇಯ. ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತಿಗೆ ಇಬ್ಬರು ಮಾಸ್ಟರ್ ತರಬೇತಿಗಳು ಇರುತ್ತಾರೆ, ಅವರು ಸ್ಥಳೀಯ ಪೊಲೀಸ್ ಅಧಿಕಾರಿಗಳೊಂದಿಗೆ ಮಾದಕ ವಸ್ತು ನಿರ್ಮೂಲನೆಗೆ ಜಾಗೃತಿ ಕಾರ್ಯಕ್ರಮಗಳನ್ನು ಮಾಡುತ್ತಾರೆ.




ಇದರ ಜೊತೆಗೆ ಇತ್ತೀಚಿನ ದಿನಗಳಲ್ಲಿ ಮಕ್ಕಳು ಮೊಬೈಲ್ ಬಳಸುವುದು ಕೂಡ ಒಂದು ಚಟವಾಗಿದ್ದು, ಮೊಬೈಲ್ ಇಲ್ಲದೆ ಜೀವಿಸುವುದು ಕಷ್ಟಕರವಾಗಿದೆ. ಮನುಷ್ಯನ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮಗಳು ಹಾಗೂ ಹವ್ಯಾಸಗಳು ಸಹ ಮಾರಕ ಎಂದು ಹೇಳಿದರು. ನಶಾ ಮುಕ್ತ ಸಮಾಜವನ್ನು ನಿರ್ಮಾಣ ಮಾಡಲು ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಮನೋಚೈತನ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗುವುದು. ಜೊತೆಗೆ ಸಾರ್ವಜನಿಕರು ಮಾದಕ ವಸ್ತುಗಳ ಬಳಕೆಯನ್ನು ನಿಯಂತ್ರಿಸಲು ಜೊತೆಯಾಗಬೇಕು. ಮಾದಕ ವಸ್ತುಗಳ ಬಳಕೆ ಕಂಡುಬಂದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಎಂದರು.

ಅಬಕಾರಿ ಇಲಾಖೆಯ ಡಿವೈಎಸ್ಪಿ ಧರಣಿ ಕುಮಾರ್ ಅವರು ಮಾತನಾಡಿ, ಮಾದಕ ವಸ್ತುಗಳು ವ್ಯಕ್ತಿಯ ದೇಹ ಮತ್ತು ಮೆದುಳನ್ನು ನಿರ್ವಹಿಸುವುದ-ರಿಂದ ಆತ ಯಾರಿಗೆ ಏನು ಬೇಕಾದರು ಮಾಡಬಹುದು. ಯುವ ಸಮೂಹದವರು ಮೋಜಿಗಾಗಿ ಬಳಸಲು ಶುರು ಮಾಡುತ್ತಾರೆ, ಅದು ಕೊನೆಗೆ ಅವರ ಜೀವನದ ಅಂತ್ಯಕ್ಕೆ ಕೊಂಡೊಯ್ಯುತ್ತದೆ. ಮಾದಕ ವಸ್ತುಗಳಿಗಾಗಿ ಕಳ್ಳತನ, ಸುಲಿಗೆ ಮತ್ತು ಅಪರಾಧಗಳನ್ನು ಮಾಡುತ್ತಾರೆ. ಮಾದಕ ವಸ್ತುಗಳ ಸೇವನೆಯಿಂದ ದೇಶದಲ್ಲಿ ಪ್ರತಿ ವರ್ಷ 33 ಲಕ್ಷ ಜನರು ಸಾಯುತ್ತಿದ್ದಾರೆ. ಎನ್.ಡಿ.ಪಿ.ಎಸ್ ಕಾಯ್ದೆ 1985 ರ ಪ್ರಕಾರ ಯಾವುದೇ ರೀತಿಯ ಮಾದಕ ವಸ್ತುಗಳನ್ನು ಬೆಳೆಯುವುದು, ಮಾರಾಟ ಮಾಡುವುದು, ಖರೀದಿ ಮಾಡುವುದು, ಸಾಗಣೆ ಮಾಡುವುದು, ಸೇವನೆ ಮಾಡುವುದು ಮತ್ತು ಸಂಗ್ರಹಣೆ ಮಾಡುವುದು ನಿಷೇಧ ಎಂದು ಹೇಳುತ್ತದೆ.

ಈ ರೀತಿ ಕಂಡುಬಂದರೆ ಗರಿಷ್ಠ 20 ವರ್ಷ ಜೈಲು ಶಿಕ್ಷೆ ಹಾಗೂ 2 ಲಕ್ಷ ದಂಡ ವಿಧಿಸಲಾಗುತ್ತದೆ. ಹಾಗಾಗಿ ಸಾರ್ವಜನಿಕರು ಈ ರೀತಿಯ ಮಾದಕ ಮುಕ್ತ ಸಮಾಜವನ್ನು ನಿರ್ಮಿಸಲು ಜಾಗೃತಿ ಮೂಡಿಸುವ ಸಲುವಾಗಿ ನಮ್ಮೊಂದಿಗೆ ಸಹಕರಿಸಬೇಕು. ಮಾನಸಿಕ ರೋಗ ತಜ್ಞರಾದ ಡಾ.ಗಿರೀಶ್ ಅವರು ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯ ನರ ಮಂಡಲ, ನರಕೋಶ, ಹೃದಯ, ಮೂತ್ರ ಪಿಂಡ, ಶ್ವಾಸಕೋಶ, ಕ್ಯಾನ್ಸರ್ ಗೆ ಸಂಬಂದಿಸಿದ ಕಾಯಿಲೆಗಳು ಉಲ್ಬಣವಾಗುತ್ತದೆ. ಹಾಗೇ ರೋಗ ನಿರೋಧಕ ಶಕ್ತಿ ಕುಗ್ಗುತ್ತದೆ, ಕೈ ಕಾಲು ನಡುಗುವುದು, ಮೂರ್ಛೆ ಹೋಗುವುದು, ಅತಿರೇಕದ ಚಟುವಟಿ-ಕೆ, ತೂಕದಲ್ಲಿ ಏರಿಳಿತ, ನಿದ್ದೆಯಲ್ಲಿ ಏರುಪೇರು ಹಾಗೂ ಪ್ರಜ್ಞೆಯಿಲ್ಲದ ರೀತಿ ವರ್ತಿಸುವುದು ಹೀಗೆ ಹಲವಾರು ದುಷ್ಪರಿಣಾಮಗಳಿಗೆ ಒಳಗಾಗುತ್ತಾರೆ. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್, ಮುಖ್ಯ ಯೋಜನಾಧಿಕಾರಿ ಕೆ.ಕೆ.ರಾಮಕೃಷ್ಣಯ್ಯ, ಯೋಜನಾ ನಿರ್ದೇಶಕರು ವಿಠ್ಠಲ್ ಕಾವ್ಳೆ, ಅಬಕಾರಿ ಇಲಾಖೆಯ ಸಿಬ್ಬಂದಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಎನ್.ಆರ್.ಎಲ್.ಎಂ ನ ಸ್ವಯಂ ಸೇವಾ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.

# ಅರಸಾಪುರ ಗ್ರಾ.ಪಂ ನೂತನ ಅಧ್ಯಕ್ಷೆಯಾಗಿ ಗಂಗರತ್ನಮ್ಮ ಅವಿರೋಧ ಆಯ್ಕೆ

ಕೊರಟಗೆರೆ: ತಾಲೂಕಿನ ಹೊಳವನಹಳ್ಳಿ ಹೋಬಳಿಯ ಅರಸಾಪುರ ಗ್ರಾಪಂ ಎರಡನೇ ಅವಧಿಯ ಅಧ್ಯಕ್ಷ ಸ್ಥಾನಕ್ಕೆ ಸರ್ವ ಸದಸ್ಯರ ಒಮ್ಮತದ ನಿರ್ಧಾರದಿಂದ ಗಂಗರತ್ನಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮಂಜುನಾಥ್ ಅಧಿಕೃತ ಘೋಷಣೆ ಮಾಡಿದರು.




ಗ್ರಾ.ಪಂ ನೂತನ ಅಧ್ಯಕ್ಷೆ ಗಂಗರತ್ನಮ್ಮ ಮಾತನಾಡಿ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರ್ಶಿವಾದ ಹಾಗೂ ಗ್ರಾ.ಪಂ ಎರಡನೇ ಅವಧಿಯ ಅಧ್ಯಕ್ಷ ಆಯ್ಕೆ ಚುನಾವಣೆಯಲ್ಲಿ ಸರ್ವ ಸದಸ್ಯರು ಭರವಸೆಯಿಟ್ಟು ಅಧ್ಯಕ್ಷ ಸ್ಥಾನಕ್ಕೆ ನನ್ನನ್ನು ಆಯ್ಕೆ ಮಾಡಿದ್ದು, ಸದಸ್ಯರ ಮತ್ತು ಅಧಿಕಾರಿಗಳ ವಿಶ್ವಾಸದೊಂದಿಗೆ ಗ್ರಾ.ಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ಹೇಳಿ ಅವಿರೋಧ ಆಯ್ಕೆ ಮಾಡಿದ ಸದಸ್ಯರಿಗೆ ಧನ್ಯವಾದ ತಿಳಿಸಿದರು.

ಗ್ರಾ.ಪಂ ಪಿಡಿಓ ಪೃಥ್ವಿಭಾ ಮಾತನಾಡಿ, ಚುನಾವಣಾಧಿಕಾರಿ ಮಂಜುನಾಥ್ ನೇತೃತ್ವದಲ್ಲಿ ಎರಡನೇ ಅವಧಿಯ ಗ್ರಾ.ಪಂ ಅಧ್ಯಕ್ಷ ಆಯ್ಕೆ ಚುನಾವಣೆ ಯಶಸ್ವಿಕಂಡಿದೆ. ಸರ್ವ ಸದಸ್ಯರು ಒಪ್ಪಿಗೆ ಸೂಚಿಸಿ ಎರಡನೇ ಅವಧಿಯ ಅಧ್ಯಕ್ಷ ಸ್ಥಾನಕ್ಕೆ ಗಂಗರತ್ನಮ್ಮರವರನ್ನು ಆಯ್ಕೆ ಮಾಡಿದ್ದಾರೆ. ನೂತನ ಅಧ್ಯಕ್ಷರು ಗ್ರಾ.ಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುವಂತೆ ತಿಳಿಸಿ ಶುಭಕೋರಿದರು. ಸದಸ್ಯ ರಾಮಕೃಷ್ಣಯ್ಯ ಎಸ್.ಕೆ ಮಾತನಾಡಿ, ನಮ್ಮ ಗ್ರಾಪಂ ಗಡಿ ಭಾಗ ಆದ ಕಾರಣ ಗ್ರಾಪಂ ಅಭಿವೃದ್ಧಿಗಾಗಿ ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಅವರ ಅನುದಾನಕ್ಕಾಗಿ ಬೇಡಿಕೆ ನೀಡಲಾಗಿದ್ದು, ಸಚಿವರು ಕೂಡ ಸ್ಪಂದಿಸಿದ್ದು ಗ್ರಾಪಂ ಅಭಿವೃದ್ಧಿಗೆ ಸಹಕರಿಸಲಿದ್ದಾರೆ.
ಗ್ರಾ.ಪಂ ಸದಸ್ಯರ ಒಪ್ಪಿಗೆಯೊಂದಿಗೆ ಅರಸಾಪುರ ಗ್ರಾ.ಪಂ ನೂತನ ಅಧ್ಯಕ್ಷರಾಗಿ ಗಂಗರತ್ನಮ್ಮನವರು ಅವಿರೋಧ ಆಯ್ಕೆಯಾಗಿದ್ದಾರೆ.

ಮುಂದಿನ ಅವಧಿಯಲ್ಲಿ ಸದಸ್ಯರನ್ನು ಮತ್ತು ಅಧಿಕಾರಿಗಳ ವಿಶ್ವಾಸಗಳಿಸಿ ನಮ್ಮ ಗ್ರಾ.ಪಂ ವ್ಯಾಪ್ತಿಯ ಪ್ರತಿ ಗ್ರಾಮ ಅಭಿವೃದ್ಧಿಗೆ ಶ್ರಮಿಸಬೇಕಿದೆ ಎಂದು ಹೇಳಿದರು. ಈ ವೇಳೆ ತಾ.ಪಂ ಮಾಜಿ ಅಧ್ಯಕ್ಷ ಟಿ.ಸಿ ರಾಮಯ್ಯ, ಉಪಾಧ್ಯಕ್ಷೆ ಪುಟ್ಟಮ್ಮ, ಸದಸ್ಯೆ ರತ್ನಮ್ಮ, ಲಿಂಗಪ್ಪ. ಎನ್, ಮಂಜುನಾಥ.ಬಿ, ಪ್ರಸನ್ನಕುಮಾರ್ ಎ.ಜಿ, ತಿಮ್ಮಯ್ಯ, ನಾಗರಾಜು, ಗಂಗಾಧರಯ್ಯ, ಲಕ್ಷಿ ?ಮೇದೇವಮ್ಮ, ಗಂಗಾಧರಯ್ಯ ಜಿ.ಸಿ, ಚಂದ್ರಕಲಾ, ಲಕ್ಷಿ ?ಮೇದೇವಮ್ಮ, ಮೋಹನ್ ಜಿ.ಎಂ, ಸಿದ್ದಗಂಗಮ್ಮ ಕೆ.ಎನ್, ಸಿದ್ದಗಂಗಮ್ಮ, ಮುಖಂಡರಾದ ಮಂಜಣ್ಣ, ರಾಜಣ್ಣ, ನಾಗರಾಜಪ್ಪ, ಬಿ.ಎಸ್.ಆರ್.ರಾಜಣ್ಣ, ನಾಗರಾಜು, ಗಂಗಣ್ಣ, ನರಸಿಂಹಮೂರ್ತಿ, ಉಗ್ರಪ್ಪ, ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

# ಡಾ.ಬಾಬು ಜಗಜೀವನ್ ರಾಂ ಭವನದ ನವೀಕರಣ ಕಾಮಗಾರಿಗೆ ಚಾಲನೆ

ದೊಡ್ಡಬಳ್ಳಾಪುರ: ನಗರದ ಡಾ. ಬಾಬು ಜಗಜೀವನ್ ರಾಂ ಭವನದ ನವೀಕರಣ ಕಾಮಗಾ-ರಿಗೆ ಶಾಸಕ ಧೀರಜ್ ಮುನಿರಾಜು ಗುರುವಾರ ಭೂಮಿ ಪೂಜೆ ಮಾಡಿ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ತಾಲ್ಲೂಕಿನಲ್ಲಿರುವ ಸರ್ಕಾರಿ ಕಟ್ಟಡಗಳಲ್ಲಿ ಅತಿ ವಿಶಾಲ ಹಾಗೂ ಬೃಹತ್ ಕಟ್ಟಡ ಹೊಂದಿರುವ ಡಾ.ಜಗಜೀವನ್ ರಾಂ ಭವನದಲ್ಲಿ ಹಲವು ಕುಂದು ಕೊರತೆಗಳ ಕಾರಣದಿಂದಾಗಿ ಸಾರ್ವಜನಿಕರ ಸದ್ಬಳಕೆ ಪ್ರಮಾಣ ಕಡಿಮೆಯಾಗಿದೆ. ಹೀಗಾಗಿ ಭವನದಲ್ಲಿನ ಸೌಂಡ್ ಸಿಸ್ಟಮ್, ಅಡ್ಡಿಗೆ ಸಂಬಂಧಿತ ವಸ್ತುಗಳು, ಮೋಲ್ಡಿಂಗ್ ಸೇರಿದಂತೆ ಇತರ ನ್ಯೂನ್ಯತೆಗಳನ್ನು ಸರಿಪಡಿಸಲಾಗುವುದು. ಕಾಮಗಾರಿಗಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 1.5 ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಭವನದ ಅಭಿವೃದ್ಧಿ ಕಾರ್ಯಕ್ಕಾಗಿ ಪ್ರತ್ಯೇಕ ಸಮಿತಿಯನ್ನು ರಚಿಸುವ ಮೂಲಕ ಅಗತ್ಯ ಸೌಕರ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕಾಮಗಾರಿಯನ್ನು ಶೀಘ್ರ ಮುಕ್ತಾಯಗೊಳಿಸಲಾಗಿವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭಾ ಅಧ್ಯಕ್ಷೆ ಸುಮಿತ್ರಾ, ಸದಸ್ಯರಾದ ಶಿವು,ವೆಂಕಟೇಶ್, ವತ್ಸಲಾ, ಹಂಸಪ್ರಿಯ,ವಕೀಲರಾದ ಕಾಂತರಾಜು, ಜೆ. ವೈ. ಮಲ್ಲಪ್ಪ ಹಲವರು ಹಾಜರಿದ್ದರು.



# ಮಕ್ಕಳ ವೈಯಕ್ತಿಕ ಆರೋಗ್ಯಕ್ಕೆ ಹೆಚ್ಚಿನ ಗಮನ ನೀಡಿ: ಪೂಜಾರಿ

ಇಂಡಿ: ಹದಿ ಹರೆಯದ ಮಕ್ಕಳು ಬಾಲಾವಸ್ಥೆಯಿಂದ ಪ್ರೌಢಾವಸ್ಥೆಗೆ ತಲುಪುವಲ್ಲಿ ದೈಹಿಕ ಹಾಗೂ ಮಾನಸಿಕ ಬದಲಾವಣೆಗಳನ್ನು ಕಾಣುತ್ತಾರೆ. ಈ ಸಮಯದಲ್ಲಿ ಅವರಿಗೆ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ತಾಂಬಾ ವಲಯದ ಆರೋಗ್ಯ ಶಿಕ್ಷಣಾಧಿಕಾರಿ ವೈ ಎಂ ಪೂಜಾರಿ ಹೇಳಿದರು.



ಬುಧವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ವಿಜಯಪುರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮದ ಅಡಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರ ತಡವಲಗ ವತಿಯಿಂದ ಹಮ್ಮಿಕೊಂಡ "ಹದಿಹರೆಯದ ಮಕ್ಕಳ ಆರೋಗ್ಯ ಮತ್ತು ಕ್ಷೇಮ ದಿನಾಚರಣೆ"ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹದಿಹರೆಯದ ಮಕ್ಕಳ ಮನಸ್ಸಿನಲ್ಲಿ ಆತಂಕ, ಭಯ, ಖಿನ್ನತೆ ಉಂಟಾಗಿ, ಮಾನಸಿಕ ಚಂಚಲತೆಗೆ ಒಳಗಾಗಿ ಮಕ್ಕಳು ದಾರಿ ತಪ್ಪುತ್ತಾರೆ. ಈ ಸಂದರ್ಭದಲ್ಲಿ ಪೋಷಕರು ಮತ್ತು ಶಿಕ್ಷಕರು ಸೂಕ್ತ ಮಾರ್ಗದರ್ಶನ ನೀಡುವ ಅವಶ್ಯಕತೆ ಇದೆ ಎಂದು ಹೇಳಿದರು. ಆರ್ ಕೆ ಎಸ್ ಕೆ ಕಾರ್ಯಕ್ರಮದ ಆಪ್ತ ಸಮಾಲೋಚಕ ರಾಮಗೊಂಡ ಭಜಂತ್ರಿ ಮಾತನಾಡಿ, ಮಕ್ಕಳು ಒಳ್ಳೆಯ ಹವ್ಯಾಸ ರೂಢಿಸಿಕೊಂಡು, ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಹೇಳಿದರು. ಸಮುದಾಯ ಆರೋಗ್ಯ ಅಧಿಕಾರಿ ಲಕ್ಷ್ಮೀ ಮೇತ್ರಿ ಅವರು ಬಾಲ್ಯವಿವಾಹದಿಂದ ಉಂಟಾಗುವ ಸಮಸ್ಯೆಗಳು, ಹೆಣ್ಣು ಮಕ್ಕಳ ಸುರಕ್ಷತೆ ಕುರಿತು ಮಾತನಾಡಿದರು.

ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಸ್ವಸ್ಥ ಸಮಾಜ ನಿರ್ಮಾಣದ ಜತೆಗೆ ಸಮೃದ್ಧ ದೇಶ ಕಟ್ಟಲು ಪ್ರತಿಯೊಬ್ಬರು ವೈಯಕ್ತಿಕ ಆರೋಗ್ಯ ಕಾಪಾಡುವ ಜತೆಗೆ ದೈನಂದಿನ ಜೀವನದಲ್ಲಿ ಪೌಷ್ಟಿಕ ಆಹಾರ ಸೇವನೆ, ದೈಹಿಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಹೇಳಿದರು.
ಶಿಕ್ಷಕ ಎಸ್ ಆರ್ ಚಾಳೇಕರ ಮಾತನಾಡಿ, ಮಕ್ಕಳು ದೈಹಿಕ, ಮಾನಸಿಕ ಆರೋಗ್ಯ ಸಮಸ್ಯೆ ಉಂಟಾದಾಗ ಸೂಕ್ತ ಮಾರ್ಗದರ್ಶನ ಪಡೆಯಬೇಕು. ಎಂದು ಹೇಳಿದರು. ಮುಖ್ಯ ಶಿಕ್ಷಕ ಅನಿಲ ಪತಂಗಿ ಅಧ್ಯಕ್ಷತೆ ವಹಿಸಿ, ಧೂಮಪಾನ, ಮದ್ಯಪಾನಗಳಿಂದ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮಗಳ ಕುರಿತು ಮಾತನಾಡಿದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎ ಎಸ್ ಪಾಟೀಲ, ಮುಖ್ಯ ಶಿಕ್ಷಕಿ ವ್ಹಿ ವೈ ಪತ್ತಾರ, ಆರೋಗ್ಯ ಸುರಕ್ಷಾ ಅಧಿಕಾರಿ ಸಾವಿತ್ರಿ ಹೊನ್ನಮೊರೆ, ಆಶಾ ಕಾರ್ಯಕರ್ತೆ ಶಾಂಭವಿ ಹೊರವಾಳ, ಬಿ ಎಸ್ ಹೊಸೂರ, ಪ್ರಜ್ವಲ ಕುಲಕರ್ಣಿ ಸೇರಿದಂತೆ ಶಾಲಾ ಮಕ್ಕಳು ಭಾಗವಹಿಸಿದ್ದರು.

# ಕನ್ನಡ ಜಾನಪದ ಪರಿಷತ್ತಿನ ಮಹಾಲಕ್ಷ್ಮಿ ಬಡಾವಣೆ ವಿ.ಕ್ಷೇತ್ರ ಅಧ್ಯಕ್ಷರಾಗಿ ಸಂದೇಶ್. ಎನ್. ಯು ಆಯ್ಕೆ

ಬೆಂಗಳೂರು: ಕನ್ನಡ ಜಾನಪದ ಪರಿಷತ್ ಮಹಾಲಕ್ಷ್ಮಿ ಬಡಾವಣೆ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾಗಿ ಪ್ರಾಧ್ಯಾಪಕರಾದ ಸಂದೇಶ್. ಎನ್. ಯು ಅವರನ್ನು ಆಯ್ಕೆ ಮಾಡಿ ಎಂದು ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷರಾದ ಡಾ ಜಾನಪದ ಎಸ್ ಬಾಲಾಜಿ ಆಯ್ಕೆ ಪತ್ರವನ್ನು ನೀಡಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಸಂದೇಶ್. ಎನ್.ಯು ಮಾತನಾಡಿ, ಆದುನಿಕತೆಯ ಭರಾಟೆಯಲ್ಲಿ ಜನರು ದೇಶಿಯ ಕಲೆಯಾದ ಜನಪದವನ್ನು ಮರೆಯುತ್ತಿದ್ದಾರೆ. ಜನಪದ ಕಥೆ ಹಾಡು, ನೃತ್ಯಗಳು, ಆಟಗಳು, ಅಳುವಿನ ಹಂಚಿನಲ್ಲಿವೆ ಆದ್ದ-ರಿಂದ ಕರ್ನಾಟಕದ ನಾನಾ ಮೂಲೆಗಳಲ್ಲಿ ಅಡಗಿ ಹೋಗಿರುವ ಜನಪದ ಸಾಹಿತ್ಯ, ಪರಂಪರೆ, ಕಲೆಗಳನ್ನು ಅದರ ಪರಿಚಯವುಳ್ಳ ಕಲಾವಿದರನ್ನು ಗುರುತಿಸಿ ಬೆಳಕಿಗೆ ತರುವುದು ಜೊತೆಗೆ ಇಂದಿನ ಮಕ್ಕಳು, ವಿದ್ಯಾರ್ಥಿಗಳು ಹಾಗೂ ಯುವ ಜನಾಂಗಕ್ಕೆ ಜಾನಪದವನ್ನು ಪರಿಚಯಿಸಿ ಬೆಳಸಿ ರಕ್ಷಿಸಿ ಪೋಶಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.

ಮಹಾಲಕ್ಷ್ಮಿ ಬಡಾವಣೆ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರನ್ನಾಗಿ ನೇಮಿಸಿ ಜವಾಬ್ದಾರಿಯನ್ನು ನೀಡಿರುವ ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷರಾದ ಡಾ ಜಾನಪದ ಎಸ್ ಬಾಲಾಜಿ ರವರಿಗೆ ಮತ್ತು ಕಜಾಪ ಬೆಂಗಳೂರು ಕೇಂದ್ರ ಜಿಲ್ಲಾ ಅಧ್ಯಕ್ಷರಾದ ಡಾ ರಿಯಾಜ್ ಪಾಷ ಅವರಿಗೆ ಮತ್ತು ನನ್ನ ಆಯ್ಕೆಗೆ ಬಹು ಮುಖ್ಯ ಪಾತ್ರ ವಹಿಸಿದ್ದ ಗೋವಿಂದರಾಜನಗರ ಮತ್ತು ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಕಜಾಪ ಅಧ್ಯಕ್ಷರಾದ ರ. ನರಸಿಂಹಮೂರ್ತಿರವ-ರಿಗೆ ಹಾಗೂ ಕನ್ನಡ ಜನಪದ ಪರಿಷತ್ತಿನ ಎಲ್ಲಾ ಪ್ರತಿನಿಧಿಗಳಿಗೆ ನಾನು ಅಭಾರಿಯಾಗಿದ್ದೇನೆ ಎಂದು ತಿಳಿಸಿದರು. ಈ ವೇಳೆ ಕನ್ನಡ ಜಾನಪದ ಪರಿಷತ್ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ಘಟಕದ ಅಧ್ಯಕ್ಷ ಮಹೇಂದ್ರ ಜಾದವ್, ಶಿಕ್ಷಕಿ ಶ್ರೀಮತಿ ಚೈತ್ರ, ಶಕುಂತಲಾ ಮತ್ತಿತರರು ಹಾಜರಿದ್ದರು.



Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.